# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 600 |
| ಮಾನ್ಯ ಸದಸ್ಯರ ಹೆಸರು | | ಡಾ: ತಳವಾರ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 22.07.2024 |
| ಪ್ರಶ್ನೆ | | ಉತ್ತರ |
| ಅ) | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯಿದೆ 2000ರ ಪ್ರಕಾರ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಪರೀಕ್ಷಣಾ ಸಮಿತಿಗೆ (LIC) ನೇಮಕ ಮಾಡಲು ಅವಕಾಶವಿದೆಯೇ; | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ 59(6)ರಲ್ಲಿ ಉಪಬಂಧಿಸಿರುವಂತೆ ಸ್ಥಳೀಯ ವಿಚಾರಣಾ ಸಮಿತಿಯು ಅನುಸೂಚಿತ ಜಾತಿಗಳಿಗೆ ಅಥವಾ ಅನುಸೂಚಿತ ಪಂಗಡಗಳಿಗೆ ಸೇರಿದ ಕನಿಷ್ಟ ಪಕ್ಷ ಒಬ್ಬರು ಸದಸ್ಯರನ್ನು ಒಳಗೊಂಡಿರತಕ್ಕದ್ದು. |
| ಆ) | ಸಂಪೂರ್ಣವಾಗಿ ಶೈಕ್ಷಣಿಕ ಹಿನ್ನಲೆ ಇಲ್ಲದಿದ್ದರೂ ವಿಶ್ವವಿದ್ಯಾಲಯಗಳು ರಾಜಕೀಯ ಒತ್ತಡಕ್ಕೆ ಮಣಿದು ಸಿಂಡಿಕೇಟ್ ಸದಸ್ಯರನ್ನು ಎಲ್ಐಸಿಯ ಅಧ್ಯಕ್ಷರನ್ನಾಗಿ ಮತ್ತು ಪ್ರಾಧ್ಯಾಪಕರನ್ನು ಸದಸ್ಯರನ್ನಾಗಿ ಮಾಡುವುದು ಸರಿಯೇ; | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಸ್ಥಳೀಯ ವಿಚಾರಣೆ ಸಮಿತಿಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಿಸುವ ಕಾರ್ಯನೀತಿಯ ಬಗ್ಗೆ ಸುದ್ದಿ ಮಾಧ್ಯಮಗಳು ಸೇರಿದಂತೆ ಸಮಾಜದ ಎಲ್ಲಾ ಸ್ತರಗಳಿಂದ ವಿರೋಧ / ಆರೋಪಗಳು ವ್ಯಕ್ತವಾಗಿರುವುದನ್ನು ಗಣನೆಗೆ ತೆಗೆದುಕೊಂಡು ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪಿಗೊಳಪಡುವ ವಿಶ್ವವಿದ್ಯಾಲಯಗಳ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಸಮಿತಿಗೆ ಸದಸ್ಯ / ಅಧ್ಯಕ್ಷರನ್ನಾಗಿ ನೇಮಕ ಮಾಡಿದಾಗ ಸಮಿತಿ ಸದಸ್ಯರಾಗಿ ಕಾಲೇಜುಗಳ ಪರಿವೀಕ್ಷಣೆ ನಡೆಸಿದ ಸದಸ್ಯರೇ ಮುಂದೆ ಸಮಿತಿಯ ವರದಿಯ ಬಗ್ಗೆ ಸಿಂಡಿಕೇಟ್ ಸಭೆಯಲ್ಲಿ ನಿರ್ಣಯ ಕೈಗೊಳ್ಳುವುದು ನೈಸರ್ಗಿಕ ನಾಯಕತ್ವದ ಉಲ್ಲಂಘನೆಯಾಗುವ ಸಾಧ್ಯತೆ ಇರುತ್ತದೆ ಮತ್ತು ನಿಷ್ಪಕ್ಷಪಾತ ಹಾಗೂ ಪಾರದರ್ಶಕವಾಗಿರಲು ಸಾಧ್ಯವಾಗುವುದಿಲ್ಲ. ಇದರ ಹಿತಾಸಕ್ತಿ ಸಂಘರ್ಷಕ್ಕೂ ಕಾರಣವಾಗುತ್ತದೆ. |
| ಇ) | ಸಿಂಡಿಕೇಟ್ ಸದಸ್ಯರ ಅಧ್ಯಕ್ಷತೆಯಲ್ಲಿ ಎಲ್ಐಸಿಯ ಸಮಿತಿಗಳು ಸಂಯೋಜಿತ ಕಾಲೇಜುಗಳಿಗೆ ಭೇಟಿ ನೀಡಿದಾಗ ಕೇಳಿ ಬರುತ್ತಿರುವ ಅವ್ಯವಹಾರಗಳನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ: | |
| ಈ) | ಸಿಂಡಿಕೇಟ್ ಸದಸ್ಯರು ಎಲ್.ಐ.ಸಿ. ಸಮಿತಿಯಲ್ಲಿರುವುದರಿಂದ ಸರ್ಕಾರದ ಮತ್ತು ವಿಶ್ವವಿದ್ಯಾಲಯಗಳ ಮಾನದಂಡಗಳನ್ನು ಬಳಸಿ ಕಾಲೇಜುಗಳ ಮೌಲ್ಯಮಾಪನ ಸರಿಯಾಗಿ ನಡೆಯುತ್ತಿಲ್ಲವೆಂದು ಆರೋಪ ಇದ್ದು ಇದನ್ನು ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? | ಈ ಹಿನ್ನೆಲೆಯಲ್ಲಿ, ಸಾಮಾಜಿಕ ಮತ್ತು ನೈಸರ್ಗಿಕ ನ್ಯಾಯದ ಪರಿಪಾಲನೆಯೊಂದಿಗೆ ಶೈಕ್ಷಣಿಕ ಹಿರಿಮೆಯನ್ನು ಸಾಧಿಸಲು ಹಾಗೂ ಶಿಕ್ಷಣ ಗುಣಮಟ್ಟವನ್ನು ವೃದ್ಧಿಸಲು ಅವಶ್ಯಕವಾದ ನ್ಯಾಯೋಚಿತ, ಪಾರದರ್ಶಕ ಹಾಗೂ ನಿಷ್ಪಕ್ಷಪಾತ ಸಂಯೋಜನೆ ಪ್ರಕ್ರಿಯೆ ರೂಪಿಸಬೇಕಾಗಿದ್ದಲ್ಲಿ, ಸ್ಥಳೀಯ ವಿಚಾರಣಾ ಸಮಿತಿಗಳಿಗೆ ವಿಷಯ ಪಾರಂಗತರನ್ನು ಹಾಗೂ ಶೈಕ್ಷಣಿಕ ತಜ್ಞರನ್ನು ನೇಮಿಸುವ ಅವಶ್ಯಕತೆಯನ್ನು ಮನಗಂಡು, ರಾಜ್ಯದ ವಿಶ್ವವಿದ್ಯಾಲಯಗಳ ಸ್ಥಳೀಯ ವಿಚಾರಣೆ ಸಮಿತಿಗಳಿಗೆ ಸಿಂಡಿಕೇಟ್ ಸದಸ್ಯರನ್ನು ಸದಸ್ಯ / ಅಧ್ಯಕ್ಷರನ್ನಾಗಿ ನೇಮಿಸದೇ ಕೇವಲ ವಿಷಯ ಪರಿಣಿತರನ್ನು / ಶಿಕ್ಷಣ ತಜ್ಞರನ್ನು ನೇಮಿಸುವಂತೆ ಹಾಗೂ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಪರಿಶೀಲನಾ ಸಮಿತಿಯ ಅಧ್ಯಕ್ಷರನ್ನಾಗಿ / ಸದಸ್ಯರನ್ನಾಗಿ ನೇಮಿಸದಿರಲು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ ಸರ್ಕಾರದಿಂದ ಸುತ್ತೋಲೆ ಸುತ್ತೋಲೆ ಸಂಖ್ಯೆ: ಇಡಿ 94 ಯುಜಿವಿ 2022. ದಿನಾಂಕ: 24.11.2022ರಲ್ಲಿ ನಿರ್ದೇಶನ ನೀಡಲಾಗಿರುತ್ತದೆ. |

ಸಂಖ್ಯೆ: ಇಡಿ 151 ಯುಎನ್ಇ 2024

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು